1 ನೇ ಹೆಚ್ಚುವರಿ ಸಿವಿಲ್ ಮತ್ತು ಜೆ.ಎಮ್.ಎಫ್.ಸಿ ನ್ಯಾಯಾಧೀಶರ ನ್ಯಾಯಾಲಯ,

ಕೆ.ಆರ್.ನಗರ .

ಸಿ.ಸಿ ನಂಃ 309/2020

ಸಾಕ್ಷಿಯ ಹೆಸರುಃ	**ಮಹದೇವ**	**ಪ್ರಾಸಾಃ 1**
ತಂದೆ ಹೆಸರುಃ	**ರಾಮೇಗೌಡ**	**ಬಾಸಾಃ 3**
ವಯಸ್ಸುಃ	**45 ವರ್ಷ**	**ದಿಃ 03-11-2025**
ಉದ್ಯೋಗಃ	**ವ್ಯವಸಾಯ**	**ಸಾಕ್ಷಿದಾರರಿಗೆ ಪ್ರಮಾಣ ವಚನ ಬೋಧಿಸಲಾಯಿತು.**
ವಾಸ ಸ್ಥಳಃ	**ಮಾಳನಾಯಕನಹಳ್ಳಿ ಗ್ರಾಮ**	

ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ ಃ

ನನಗೆ ಈ ಪ್ರಕರಣದ ಘಟನೆಯ ಬಗ್ಗೆ ಗೊತ್ತಿರುವುದಿಲ್ಲ. ನಾನು ಈ ಪ್ರಕರಣಕ್ಕೆ ಸಂಬಂದಿಸಿದಂತೆ ಯಾವುದೇ ಘಟನಾ ಸ್ಥಳಕ್ಕೆ ಹೋಗಿರುವುದಿಲ್ಲ ಹಾಗೂ ಪೋಲಿಸರು ನನ್ನ ಸಮಕ್ಷಮ ಯಾವುದೇ ಘಟನಾ ಸ್ಥಳದ ಪಂಚನಾಮೆ ಅಥವಾ ಜಪ್ತಿ ಪಂಚನಾಮೆ ಮಾಡಿರುವುದಿಲ್ಲ. ನನಗೆ ಈ ಪ್ರಕರಣದ ಆರೋಪಿತರ ಪರಿಚಯ ಇಲ್ಲ ಮತ್ತು ಅವರನ್ನು ಇದೆ ಮೊದಲ ಬಾರಿಗೆ ನಾನು ನ್ಯಾಯಾಲಯದಲ್ಲಿ ನೋಡುತ್ತಿದ್ದೇನೆ. ನನಗೆ ಈ ಪ್ರಕರಣದ ಘಟನೆಯ ಬಗ್ಗೆ ಆಗಲಿ ಅಥವಾ ಘಟನಾ ಸ್ಥಳದ ಬಗ್ಗೆ ಆಗಲಿ ನನಗೆ ಮಾಹಿತಿ ಇರುವುದಿಲ್ಲ. ನಾನು ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಪೋಲಿಸರಿಗೆ ಯಾವುದೆ ಹೇಳಿಕೆಯನ್ನು ನೀಡಿರುವುದಿಲ್ಲ.

(**ಈ ಹಂತದಲ್ಲಿ ಮಾನ್ಯ ಹಿ.ಸ.ಸ.ಅ ರವರು ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿದಾರರು ಎಂದು ಪರಿಗಣಿಸಿ ಪಾಟೀ ಸವಾಲು ಮಡಲು ಅನುಮತಿ ಕೋರಿದರು – ಅನುಮತಿ ನೀಡಲಾಯಿತು**)

ಪಾಟೀ ಸವಾಲು ಃ ಮಾನ್ಯ ಸ.ಸ.ಅ. ರವರಿಂದಃ

ದಿಃ 14.05.2019 ರಂದು ಮಧ್ಯಾಹ್ನ 1.00 ರಿಂದ 2.00 ಗಂಟೆಯವರೆಗೆ ಬಾಸಾಃ1 ರವರು ತೋರಿಸಿ ಕೊಟ್ಟ ಮೇರೆಗೆ ನನ್ನ ಮತ್ತು ಬಾಸಾಃ9 ಮತ್ತು 10 ರವರ ಸಮಕ್ಷಮದಲ್ಲಿ ಪೋಲಿಸರು ಈ ಪ್ರಕರಣದ ಘಟನಾ ಸ್ಥಳದ ಪಂಚನಾಮೆ ಮತ್ತು ಜಪ್ತಿ ಪಂಚನಾಮೆ ಮಾಡಿ ಅಪಘಾತಪಡಿಸಿದ ಮತ್ತು ಅಪಘಾತಕ್ಕೀಡಾದ ವಾಹನಗಳನ್ನು ಜಪ್ತಿಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ.

ಸಾಕ್ಷಿಯು ಘಟನಾ ಸ್ಥಳದ ಮತ್ತು ಅಮಾನತ್ತು ಪಂಚನಾಮೆಯನ್ನು ಮತ್ತು ಸ್ಥಳ ನಕಾಶೆಯನ್ನು ತೋರಿಸಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಘಟನಾ ಸ್ಥಳದ ಮತ್ತು ಅಮಾನತ್ತು ಪಂಚನಾಮೆಯನ್ನು ನಿಪಿ.1 ಎಂದು, ಸಾಕ್ಷಿಯ ಸಹಿಯನ್ನು ನಿಪಿ.1(ಎ) ಎಂದು, ಸ್ಥಳ ನಕಾಶೆಯನ್ನು ನಿಪಿ.2 ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ.2(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ಮುಂದುವರೆದು ನಿಪಿ–1 ಮತ್ತು ನಿಪಿ–2 ರಲ್ಲಿ ತಾನು ಪೋಲಿಸರ ಹೇಳಿಕೆಯ ಮೇರೆಗೆ ಠಾಣೆಯಲ್ಲಿ ಸಹಿ ಹಾಕಿರುತ್ತೇನೆ ಹಾಗೂ ನಿಪಿ–1 ಮತ್ತು ನಿಪಿ–2 ರಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ. ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲು ಆರೋಪಿತರ ಪರ ವಕೀಲರವರಿಂದಃ</u>

ತಮ್ಮ ಪರ ಯಾವುದೇ ಪಾಟೀ ಸವಾಲು ಇಲ್ಲ ಎಂದು ಆರೋಪಿ ಪರ ವಕೀಲರು ಹೇಳಿರುತ್ತಾರೆ.

ಮರುವಿಚಾರಣೆ ಃ ಇರುವುದಿಲ್ಲ.

(ಸಾಕ್ಷಿ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು.)

ಓ. ಹೇ. ಕೇ. ಸರಿ ಇದೆ.

1 ನೇ ಹೆಚ್ಚುವರಿ ಮತ್ತು ಜೆಎಂಎಫ್‌ಸಿ ನ್ಯಾಯಾಧೀಶರು
ಕೆ.ಆರ್.ನಗರ